I/200960/2021

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:42(19)-2-1RRC:21 (ಇ-530584)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ, ಬೆಂಗಳೂರು,
ದಿನಾಂಕ: 27.12.2021

**ತಿದ್ದುಪಡಿ ಆದೇಶ**

**ವಿಷಯ:** 2021-22 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಕೋಲಾರ ಜಿಲ್ಲೆಯ ಕೆ.ಜಿಎಫ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳ ಅನುಷ್ಠಾನ ಸಂಸ್ಥೆಯನ್ನು ಬದಲಾವಣೆ ಮಾಡುವ ಕುರಿತು.

**ಉಲ್ಲೇಖ:** (1) ಸರ್ಕಾರದ ಆದೇಶ ಸಂ: ಗ್ರಾಅಪ:42(19)-2: ಆರ್‌ಆರ್‌ಸಿ: 2021, ದಿನಾಂಕ: 21.12.2021

(2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೋಲಾರ ಜಿ.ಪಂ.ರವರ ಪತ್ರ ಸಂ: ಜಿಪಂಕೋ/ಅಭಿವೃದ್ಧಿ/3054 ರಸ್ತೆಗಳು/ಸಿಆರ್3/2021-22, ದಿನಾಂಕ: 18.11.2021

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಆದೇಶದಲ್ಲಿ2021-22 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಕೋಲಾರ ಜಿಲ್ಲೆಯ ಕೆ.ಜಿಎಫ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೂ. 5.00 ಕೋಟಿಗಳ ಮೊತ್ತದಲ್ಲಿ 80 ರಸ್ತೆ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಅನುಷ್ಠಾನ ಮಾಡಲು ಮಂಜೂರಾತಿ ನೀಡಲಾಗಿರುತ್ತದೆ.

ಸದರಿ ಮಂಜೂರಾತಿ ನೀಡಲಾಗಿದ್ದ 80 ರಸ್ತೆ ಕಾಮಗಾರಿಗಳಲ್ಲಿ ತಲಾ ರೂ. 10.00 ಲಕ್ಷಗಳ 20 ರಸ್ತೆ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಬದಲಾಗಿ KRIDL ಸಂಸ್ಥೆಯಿಂದ ಅನುಷ್ಠಾನ ಮಾಡುವಂತೆ ಕೋರಲಾಗಿದೆ.

ಅದರಂತೆ ಕ್ರಿಯಾ ಯೋಜನೆಯನ್ನು ತಯಾರಿಸುವಾಗ ಪ್ರತಿ ಕಿಮೀಗೆ ತಗಲುವ ವೆಚ್ಚದ ಮಾಹಿತಿಯನ್ನು,ರಸ್ತೆಯ ಚೈನೇಜ್ ಹಾಗೂ Longitude and Latitude ನ್ನು ನಮೂದಿಸುವ ಷರತ್ತಿಗಒಳಪಟ್ಟು 20 ರಸ್ತೆ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಬದಲಾಗಿ KRIDL ಸಂಸ್ಥೆಯಿಂದ ಅನುಷ್ಠಾನ ಮಾಡಲು ಸರ್ಕಾರವು ಅನುಮೋದಿಸಿದೆ ಹಾಗೂ ಉಳಿದಂತೆ ಆದೇಶದಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**Signed by Ramesh .d.o**
**Date: 27-12-2021 12:43:32**

27/12/21

(ರಮೇಶ್ ಡಿ.ಓ)
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.

2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡಮ ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೋಲಾರ ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ